**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರವಾಗಿ ಶ್ರೀ ಬಿ.ಪಿ.ಎನ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.–1 | ದಿನಾಂಕ 10.09.2020 ರ ನೊಂದಾಯಿತ ಟ್ರಸ್ಟ್ ಡಿಡ್ ನ ದೃಢಿಕೃತ ನಕಲು |
| ನಿ.ಪಿ.–2 | ಅಸ್ಮೆಂಟ್ ರಿಜೇಸ್ಟರ್ |
| ನಿ.ಪಿ.–3 | ತೆರಿಗೆ ನಿರ್ಧರಣ ಪಟ್ಟಿ |
| ನಿ.ಪಿ.–4 | ಬಾಡಿಗೆ ಕರಾರು ಪತ್ರ |
| ನಿ.ಪಿ.–5 | ಇ–ಸ್ವತ್ತು ದಾಖಲೆ |
| ನಿ.ಪಿ.–6 | ಲೀಗಲ್ ನೋಟಿಸು |
| ನಿ.ಪಿ.–7 | ಅಂಚೆ ರಶೀದಿ |
| ನಿ.ಪಿ.–8 | ಎಸ್.ಇ 18/2024 ನ ಆದೇಶ ಪುಟಗಳ ದೃಢಿಕೃತ ನಕಲು |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪ್ರತಿವಾದಿಯ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**